## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-**. ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ಗಣಕ ಯಂತ್ರಗಳ ಖರೀದಿಯಲ್ಲಿ ಎಸಗಿರುವ ಅಕ್ರಮಗಳ ಬಗ್ಗೆ ತನಿಖೆ- ತನಿಖೆಯ ಅವಧಿಯನ್ನು ವಿಸ್ತರಿಸುವ ಬಗ್ಗೆ ಆದೇಶ.

**ಓದಲಾಗಿದೆ**

| | |
|---|---|
| 1. | ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 46 ಇಎನ್‌ಕ್ಯೂ 2016, ದಿನಾಂಕ:07.6.2016. |
| 2. | ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 46 ಇಎನ್‌ಕ್ಯೂ 16, ದಿನಾಂಕ:3.9.16. |
| 3. | ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಪತ್ರ ಸಂಖ್ಯೆ:ಮುಇಂ/ಗ್ರಾಕುನೀ&ನೈಇ/ಗಯತ್ರ/ತನಿಖೆ/2016-17, ದಿ:26.11.2016. |

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:07.6.2016 ರ ಆದೇಶದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಎನ್.ಆರ್.ಡಿ.ಡಬ್ಯೂ.ಪಿ ಯೋಜನೆಯಡಿ ಗಣಕ ಯಂತ್ರಗಳ ಖರೀದಿ, ಪ್ರಕ್ರಿಯೆಗಳಲ್ಲಿ ನಡೆದಿರುತ್ತದೆ ಎನ್ನಲಾದ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ತನಿಖೆ ನಡೆಸಲು ನಿವೃತ್ತ ಜಿಲ್ಲಾ ನ್ಯಾಯಾದೀಶರಾದ ಶ್ರೀ ಎಸ್.ವೈ ಕುಂಬಾರ್ ಇವರನ್ನು ತನಿಖಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ತನಿಖೆಯನ್ನು ಒಂದು ತಿಂಗಳೊಳಗೆ ಪೂರ್ಣಗೊಳಿಸಲು ಸಮಯವನ್ನು ನಿಗಧಿಪಡಿಸಲಾಗಿರುತ್ತದೆ. ತನಿಖೆಯ ಉದ್ದೇಶಕ್ಕೆ ಅಗತ್ಯವಿರುವ ದಾಖಲೆಗಳು, ಸ್ಥಳಾವಕಾಶ, ಲೇಖನ ಸಾಮಗ್ರಿಗಳು ಮತ್ತು ಸಿಬ್ಬಂದಿಯನ್ನು ಒದಗಿಸಲು ಉಪಕಾರ್ಯದರ್ಶಿ, ಮತ್ತು ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರಿಗೆ ಸೂಚಿಸಲಾಗಿದೆ. ಅಲ್ಲದೆ ತನಿಖೆಗೆ ಅಗತ್ಯ ಸಹಾಯ/ಸಹಕಾರ ನೀಡಲು ಉಪ ಕಾರ್ಯದರ್ಶಿ, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರನ್ನು ಸಹಾಯಕ ಅಧಿಕಾರಿಯೆಂದು ನೇಮಿಸಲಾಗಿದೆ. ಅಲ್ಲದೆ ಈ ದಿಸೆಯಲ್ಲಿ ತ್ವರತವಾಗಿ ಕ್ರಮಕೈಗೊಳ್ಳಲು ದಿನಾಂಕ:3.9.2016 ರ ಪತ್ರದಲ್ಲಿ ತನಿಖಾಧಿಕಾರಿ ಹಾಗೂ ಸಹಾಯಕ ಅಧಿಕಾರಿಯವರಿಗೆ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:26.11.2016 ರ ಪತ್ರದಲ್ಲಿ ಉಪ ಕಾರ್ಯದರ್ಶಿ, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರು ಸರ್ಕಾರಕ್ಕೆ ಪತ್ರ ಬರೆದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಎನ್.ಆರ್.ಡಿ.ಡಬ್ಯೂ.ಪಿ ಯೋಜನೆಯಡಿ ಗಣಕಯಂತ್ರಗಳ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆ ಕೈಗೊಳ್ಳಲು ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ತನಿಖಾಧಿಕಾರಿಯನ್ನಾಗಿ ನೇಮಕ ಮಾಡಿದ್ದು, ಒಂದು ತಿಂಗಳ ಅವಧಿಯೊಳಗೆ ವರದಿ ಸಲ್ಲಿಸಲು ಕಾಲಾವಧಿ ನಿಗಧಿಪಡಿಸಲಾಗಿರುತ್ತದೆಯೆಂದು, ಅದರಂತೆ ಮುಖ್ಯ ಇಂಜಿನಿಯರ್ ಇವರ ಪತ್ರದಲ್ಲಿ ತನಿಖೆಗೆ ಅಗತ್ಯವಿರುವ ವ್ಯವಸ್ಥೆ ಕಲ್ಪಿಸುವಂತೆ ತನಿಖಾಧಿಕಾರಿಗಳನ್ನು ಕೋರಲಾಗಿದೆ ಎಂದು, ಇದೇ ಪ್ರಕರಣಕ್ಕೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:43738-39/2016 (ಜಿಎಂ) ಪ್ರಕರಣ ದಾಖಲಾಗಿರುವುದರಿಂದ ತನಿಖೆಯನ್ನು ಪೂರ್ಣಗೊಳಿಸಲು ದಿನಾಂಕ:7.6.2016 ರ ಆದೇಶದಲ್ಲಿ ನಿಗಪಡಿಸಿರುವ ಕಾಲಾವಧಿಯನ್ನು ವಿಸ್ತರಿಸಿ, ಆದೇಶ ಹೊರಡಿಸಲು ಸರ್ಕಾರವನ್ನು ಕೋರಿರುತ್ತಾರೆ.

---2

ಸರ್ಕಾರವು ಈ ಬಗ್ಗೆ ಪರಿಶೀಲಿಸಿರುತ್ತದೆ. ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:7.6.2016 ರ ಆದೇಶದಲ್ಲಿ ತನಿಖೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ನಿಗಧಿಪಡಿಸಿರುವ ಒಂದು ತಿಂಗಳ ಕಾಲಾವಧಿ ನಿಗಧಿಪಡಿಸಿದ್ದು, ಅವಧಿಯು ಪೂರ್ಣಗೊಂಡಿರುವುದರಿಂದ ತನಿಖೆಯನ್ನು ಪೂರ್ಣಗೊಳಿಸಲು ಹಾಗೂ ವರದಿ ಸಲ್ಲಿಸಲು ಹೆಚ್ಚಿನ ಕಾಲಾವಕಾಶ ನೀಡಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 46 ಇಎನ್‌ಕ್ಯೂ 16 (ಭಾ) ಬೆಂಗಳೂರು, ದಿನಾಂಕ:28.11.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಆದೇಶ ಸಂಖ್ಯೆ:ಗ್ರಾಅಪ 46 ಇಎನ್‌ಕ್ಯೂ 2016, ದಿನಾಂಕ:07.6.2016. ರಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ಗಣಕ ಯಂತ್ರಗಳ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಕುರಿತಂತೆ ತನಿಖೆ ನಡೆಸಿ ವರದಿ ಸಲ್ಲಿಸಲು ಕಾಲಾವಕಾಶವನ್ನು ದಿನಾಂಕ:31.12.2016 ರವರಗೆ ವಿಸ್ತರಿಸಲಾಗಿದೆ.

ಸದರಿ ದಿನಾಂಕದೊಳಗೆ ತನಿಖೆ ಪೂರ್ಣಗೊಳಿಸಿ, ತನಿಖಾ ವರದಿ ಸಲ್ಲಿಸಲು ತನಿಖಾಧಿಕಾರಿಗಳಿಗೆ ಎಲ್ಲಾ ಅಗತ್ಯ ಸಹಾಯ/ಸಹಕಾರ ನೀಡಲು ಉಪಕಾರ್ಯದರ್ಶಿ, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರಿಗೆ ಸೂಚಿಸಿದೆ.

ದಿನಾಂಕ:31.12.2016 ರೊಳಗೆ ತನಿಖೆ ಪೂರ್ಣಗೊಳಿಸಿ, ತನಿಖಾ ವರದಿ ಸಲ್ಲಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ತನಿಖಾಧಿಕಾರಿಗಳಾದ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರಿಗೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೂಜಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಶ್ರೀ ಎಸ್.ವೈ. ಕುಂಬಾರ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.394, 18 ನೇ ಮೇನ್, 6 ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-95- (ಮೊಬೈಲ್ ಸಂಖ್ಯೆ: 9900245450) ಇವರಿಗೆ ತುರ್ತು ಅಗತ್ಯ ಕ್ರಮಕ್ಕಾಗಿ.
2. ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
3. ಉಪ ಕಾರ್ಯದರ್ಶಿ, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು (ಮೊಬೈಲ್ ಸಂಖ್ಯೆ:9448396504) ಇವರಿಗೆ ತುರ್ತು ಅಗತ್ಯ ಕ್ರಮಕ್ಕಾಗಿ.
4. ಸರ್ಕಾರಿ ವಕೀಲರು, ಅಡ್ವೋಕೇಟ್ ಜನರಲ್ ರವರ ಕಛೇರಿ, ಉಚ್ಚ ನ್ಯಾಯಾಲಯದ ಕಟ್ಟಡ, ಬೆಂಗಳೂರು (ರಿಟ್ ಅರ್ಜಿ ಸಂಖ್ಯೆ:43738/16 ಕ್ಕೆ ಸಂಬಂದಿಸಿದಂತೆ)
5. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
7. ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
8. ಶಾಖಾ ರಕ್ಷಾ ಕಡತ/ ಕಂಪ್ಯೂಟರ್ ಸೆಲ್/ಹೆಚ್ಚುವರಿ ಪ್ರತಿಗಳು